ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತಮೂರನೆಯ ಅಧಿವೇಶನ

ಮಂಗಳವಾರ, ದಿನಾಂಕ: 2ನೇ ಫೆಬ್ರುವರಿ, 2021

ಕೃಷಿ ಉತ್ಪನ್ನ ಮಾರುಕಟ್ಟೆ ಪ್ರಾಂಗಣಗಳಲ್ಲಿ ಅಗತ್ಯ ಮೂಲ ಸೌಕರ್ಯಗಳ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

163(75) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಡ್ಯ ಜಿಲ್ಲೆ ವ್ಯಾಪ್ತಿಯ ಕೃಷಿ ಉತ್ಪನ್ನ ಮಾರುಕಟ್ಟೆ ಪ್ರಾಂಗಣಗಳಲ್ಲಿ ಅಗತ್ಯ ಮೂಲ ಸೌಕರ್ಯಗಳನ್ನು ಒದಗಿಸಲು ಇಲಾಖೆ ಯಾವ ಕ್ರಿಯಾ ಯೋಜನೆ ರೂಪಿಸಿದೆ ವಿವರವಾದ ಮಾಹಿತಿಯನ್ನು ತಾಲ್ಲೂಕುವಾರು ನೀಡುವುದು;

(ಆ) ಮಂಡ್ಯ ಜಿಲ್ಲೆ ನಾಗಮಂಗಲ ತಾಲ್ಲೂಕಿನ ಕೃಷಿ ಉತ್ಪನ್ನ ಮಾರುಕಟ್ಟೆ ಪ್ರಾಂಗಣದಲ್ಲಿ ಅಗತ್ಯ ಮೂಲ ಸೌಕರ್ಯಗಳಿಲ್ಲದೆ ದಿನನಿತ್ಯ ರೈತರು ಮತ್ತು ವರ್ತಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇವುಗಳನ್ನು ಸರಿಪಡಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ನಾಗಮಂಗಲ ಎ.ಪಿ.ಎಂ.ಸಿ ಯಲ್ಲಿ ಶೌಚಾಲಯ, ವೇ ಬ್ರಿಡ್ಜ್ ಹಾಗೂ ಇತರೆ ಕಾಮಗಾರಿಗಳು ಕಳಪೆ ಗುಣಮಟ್ಟದಿಂದ ಕೂಡಿದ್ದು ಇವುಗಳನ್ನು ರೈತರು ಮತ್ತು ವರ್ತಕರು ಬಳಸದಂತಹ ಸ್ಥಿತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಆಗಿದ್ದಲ್ಲಿ, ಕಾಮಗಾರಿ ನಿರ್ವಹಿಸಿದ ಗುತ್ತಿಗೆದಾರರು ಮತ್ತು ಇಲಾಖಾ ಮುಖ್ಯಸ್ಥರ ವಿರುದ್ಧ ಕೈಗೊಂಡಿರುವ ಕ್ರಮಗಳೇನು ?